**ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 13-05-2020 ರಂದು ಬೆಳಗ್ಗೆ 10-30 ಗಂಟೆಗೆ ಕೊಠಡಿ ಸಂಖ್ಯೆ:313, ವಿಧಾನಸೌಧ, ಬೆಂಗಳೂರು ಇಲ್ಲಿ 2019-20ನೇ ಸಾಲಿನ ಪ್ರಗತಿ ಹಾಗೂ 2020-21ನೇ ಸಾಲಿನ ಕ್ರಿಯಾಯೋಜನೆಯ ಪರಿಶೀಲನಾ ಸಭಾ ನಡವಳಿಗಳು.**

ಮಾನ್ಯ ಸಚಿವರು 2019-20 ನೇ ಸಾಲಿನಲ್ಲಿ ಇಲಾಖೆ ವತಿಯಿಂದ ಅನುಷ್ಠಾನಿಸಲಾದ ಕಾರ್ಯಕ್ರಮಗಳ ಪ್ರಗತಿ ಹಾಗೂ 2020-21 ನೇ ಸಾಲಿನ ಕ್ರಿಯಾಯೋಜನೆಯನ್ನು ಪರಿಶೀಲನೆ ನಡೆಸಿ ಈ ಕೆಳಕಂಡ ಸೂಚನೆಗಳನ್ನು ನೀಡಿದರು

1. 2019-20ನೇ ಸಾಲಿನಲ್ಲಿ ಅನುಷ್ಠಾನಿಸಲಾದ ಯೋಜನೆಗಳಡಿ ಪೂರ್ಣ ಪ್ರಮಾಣದಲ್ಲಿ ಅನುದಾನವನ್ನು ಬಳಸಿಕೊಳ್ಳಲಾಗದಿದ್ದಲ್ಲಿ ಬಾಕಿ ಅನುದಾನವನ್ನು 2020-21ನೇ ಸಾಲಿಗೆ ಆರ್ಥಿಕ ಇಲಾಖೆಯಿಂದ ಮರು ಬಿಡುಗಡೆ ಮಾಡಿಸಿಕೊಳ್ಳಲು ಕ್ರಮವಹಿಸುವುದು.

2. ಜಲಜೀವನ ಮಿಷನ್ ಕಾರ್ಯಕ್ರಮದಡಿ ತುರ್ತಾಗಿ ಕ್ರಿಯಾಯೋಜನೆಯನ್ನು ಅಂತಿಮಗೊಳಿಸಿ ಕಾಮಗಾರಿಗಳ ಟೆಂಡರ್ ಕರೆದ ನಂತರ ಸಾರ್ವಜನಿಕರಿಗೆ ಯೋಜನೆಯ ಬಗ್ಗೆ ಮಾಹಿತಿ ನೀಡಲು ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

3. ಜಲಜೀವನ ಮಿಷನ್ ಕಾರ್ಯಕ್ರಮದಡಿ ರಾಜ್ಯದಲ್ಲಿ ಅನುಷ್ಠಾನಿಸಲಾಗುತ್ತಿರುವ **"ಮನೆಮನೆಗೆ ಗಂಗೆ"** ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ಮುಖ್ಯಮಂತ್ರಿಯವರಿಂದ ಆಯೋಜಿಸುವುದು. ಈ ಬಗ್ಗೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವುದು.

4. ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ನಿರ್ಮಿಸಲಾಗುವ ಸಮುದಾಯ ಶೌಚಾಲಯಗಳ ನಿರ್ವಹಣೆಗೆ 15ನೇ ಹಣಕಾಸು ಆಯೋಗದ ಅನುದಾನವನ್ನು ಬಳಸುವ ಕುರಿತು ಪರಿಶೀಲಿಸಿ ಸೂಕ್ತ ಮಾರ್ಗಸೂಚಿಗಳನ್ನು ಹೊರಡಿಸುವುದು.

5. ಕೇವಲ ಸಮುದಾಯ ಶೌಚಾಲಯಗಳ ನಿರ್ಮಾಣಕ್ಕೆ ಆದ್ಯತೆ ನೀಡದೆ ನಿರ್ವಹಣೆಗೆ ಅತಿ ಹೆಚ್ಚಿನ ಮಹತ್ವ ನೀಡಲು ಕರೆ ನೀಡಿದರು. ಈ ನಿಟ್ಟಿನಲ್ಲಿ ಸಮುದಾಯ ಶೌಚಾಲಯಗಳ ನಿರ್ವಹಣೆಗಾಗಿಯೇ ಗ್ರಾಮ ಪಂಚಾಯಿತಿಗಳಲ್ಲಿ ಒಬ್ಬ ಪ್ರತ್ಯೇಕ ಸಿಬ್ಬಂದಿಯೊಬ್ಬರನ್ನು ನಿಯೋಜಿಸುವುದು.

6. ಭಾರತ ಸರ್ಕಾರದಿಂದ ಘನತ್ಯಾಜ್ಯ ನಿರ್ವಹಣಾ ಘಟಕ ವೆಚ್ಚವನ್ನು ತಲಾ ಆದಾಯ (per capita) ಆಧಾರದ ಮೇಲೆ ನಿರ್ಧರಿಸಲು, ಮಾರ್ಗಸೂಚಿಯಲ್ಲಿ ಪರಿಷ್ಕರಣೆ ಮಾಡಿರುವುದರಿಂದ, ಘಟಕಗಳ ನಿರ್ಮಾಣಕ್ಕೆ ಅನುದಾನವು ಕಡಿಮೆಯಾಗುವ ಸಂಭವವಿರುತ್ತದೆ. ಆದಕಾರಣ 15ನೇ ಹಣಕಾಸು ಆಯೋಗದ ಅನುದಾನದಿಂದ ಘಟಕ ನಿರ್ಮಾಣಕ್ಕೆ ಅಗತ್ಯವಿರುವ ಹೆಚ್ಚುವರಿ ಅನುದಾನವನ್ನು ಭರಿಸುವ ಕುರಿತು ಪರಿಶೀಲಿಸಿ ಅಗತ್ಯ ಮಾರ್ಗಸೂಚಿಗಳನ್ನು ಹೊರಡಿಸುವುದು.

7. ಕೇಂದ್ರ ಪ್ರಾಯೋಜಿತ PMGSY ಯೋಜನೆಯಡಿ ತೆಗೆದುಕೊಳ್ಳಲಾಗುವ ಕಾಮಗಾರಿಗಳ ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರದರ್ಶಿಸಲು ದೊಡ್ಡ ದೊಡ್ಡ ಜಾಹಿರಾತು ಫಲಕಗಳನ್ನು ಗುತ್ತಿಗೆದಾರರ ವತಿಯಿಂದ ಅಳವಡಿಸಲು ಕ್ರಮವಹಿಸುವುದು.

8. ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಇನ್ನು ಆರಂಭಿಸದ ಕಾಮಗಾರಿಗಳನ್ನು ಕೈಬಿಡಲು ಹಾಗೂ ಪೂರ್ಣಗೊಂಡ ಕಾಮಗಾರಿಗಳಿಗೆ ಮಾತ್ರ ಅವಶ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸುವುದು.

9. ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕಟ್ಟಡಗಳಿಗೆ ಸೌರ ಫಲಕಗಳನ್ನು ಅಳವಡಿಸುವ ಬಗ್ಗೆ 15ನೇ ಹಣಕಾಸು ಯೋಜನೆಯ ಅನುದಾನವನ್ನು ಬಳಸಿಕೊಳ್ಳಲು ಸಹಕಾರಿಯಾಗುವಂತೆ ಪರಿಶೀಲಿಸಿ ಅಗತ್ಯ ಮಾರ್ಗಸೂಚಿಯನ್ನು ನೀಡುವುದು.

ಮೇಲ್ಕಂಡ ಎಲ್ಲಾ ಅಂಶಗಳ ಮೇಲೆ ನಡವಳಿ ತಲುಪಿದ ಕೂಡಲೇ ಅಗತ್ಯ ಕ್ರಮ ಕೈಗೊಂಡು, ಅನುಪಾಲನಾ ವರದಿಯನ್ನು ನೀಡಲು ಸೂಚಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**(ಕೆ.ಎಸ್. ಈಶ್ವರಪ್ಪ)**
**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು**

ಸಂಖ್ಯೆ:ಗ್ರಾಅಪ/68/ಯೋಉಮಾ/2019 ದಿನಾಂಕ: 15-05-2020

**<u>ಇವರಿಗೆ:</u>**

1. ಆಯುಕ್ತರು, ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ, ಬೆಂಗಳೂರು.

2. ಆಯುಕ್ತರು, ಕ.ಗ್ರಾ.ನೀ.ಸ. & ನೈರ್ಮಲ್ಯ ಇಲಾಖೆ, ಕಾವೇರಿಭವನ, ಬೆಂಗಳೂರು-09.
3. ನಿರ್ದೇಶಕರು, ಜಲಾಮೃತ.
4. ನಿರ್ದೇಶಕರು ಪಂಚಾಯತ್ ರಾಜ್ -1/ ಪಂಚಾಯತ್ ರಾಜ್ -2 / ಗ್ರಾಮೂಸೌ-I / ಗ್ರಾಮೂಸೌ-II / ಇ-ಆಡಳಿತ/ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಮುಖ್ಯ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು & ನೈರ್ಮಲ್ಯ ಇಲಾಖೆ.
6. ಮುಖ್ಯ ಇಂಜಿನಿಯರ್, ಪಂ. ರಾಜ್ ಇಂ.ಇಲಾಖೆ. ಬೆಂಗಳೂರು.
7. ಮುಖ್ಯ ಕಾರ್ಯಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್) ರವರ ಆಪ್ತ ಕಾರ್ಯದರ್ಶಿಗಳು.